ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಎರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 17ನೇ ಡಿಸೆಂಬರ್, 2018

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಸಂತಾಪ ಸೂಚನೆ

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:-**

ದಿನಾಂಕ: 10.12.2018ರ ಒಂದನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಗೂಳಿಹಟ್ಟಿ ಡಿ.ಶೇಖರ್** ಇವರ **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ.4(34)** : ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

1. ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2017ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಈ ಕೆಳಕಂಡ ವರದಿಗಳನ್ನು ಸಭೆಯ ಮುಂದಿಡುವುದು:

1) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಘನತ್ಯಾಜ್ಯ ನಿರ್ವಹಣೆಯ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿ (2018ನೇ ವರ್ಷದ ವರದಿ ಸಂಖ್ಯೆ-4).
2) ಸರ್ಕಾರಿ ಭೂಮಿ ಮಂಜೂರಾತಿ, ಗುತ್ತಿಗೆ, ಒತ್ತುವರಿಗಳ ತೆರವುಗೊಳಿಸುವಿಕೆ ಹಾಗೂ ಅಕ್ರಮ ಹಿಡುವಳಿಗಳನ್ನು ಸಕ್ರಮಗೊಳಿಸುವಿಕೆಗಳ ವರದಿ (2018ನೇ ವರ್ಷದ ವರದಿ ಸಂಖ್ಯೆ-5).

... 2/ ..

4. ಶಾಸನ ರಚನೆ

I. ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2018ನೇ ಸಾಲಿನ ಕರ್ನಾಟಕ ಸಿವಿಲ್ ಸೇವೆಗಳ (ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2018ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಬಂಡೆಪ್ಪ ಖಾಶೆಂಪೂರ (ಮಾನ್ಯ ಸಹಕಾರ ಸಚಿವರು) ಅವರು:-

ಅ) 2018ನೇ ಸಾಲಿನ ಕರ್ನಾಟಕ ಋಣ ಪರಿಹಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಪ್ರಿಯಾಂಕ ಖರ್ಗೆ (ಮಾನ್ಯ ಸಮಾಜ ಕಲ್ಯಾಣ ಸಚಿವರು) ಅವರು:-

ಅ) 2018ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಸಿ. ಪುಟ್ಟರಂಗಶೆಟ್ಟಿ (ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:–

ಅ) 2018ನೇ ಸಾಲಿನ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ಕೆ.ಎಸ್.ಲಿಂಗೇಶ್ ಮತ್ತು ಸಿ.ಎನ್.ಬಾಲಕೃಷ್ಣ ಇವರುಗಳು** – ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಸಕಲೇಶಪುರ, ಬೇಲೂರು ಮತ್ತು ಅರಸೀಕೆರೆ ತಾಲ್ಲೂಕುಗಳಲ್ಲಿನ ರೈತರಿಗೆ ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿದ್ದು ಯೋಜನೆಯನ್ನು ತ್ವರಿತಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಗೋವಿಂದ.ಎಂ.ಕಾರಜೋಳ, ಎಂ.ಪಿ.ರೇಣುಕಾಚಾರ್ಯ ಮತ್ತು ಕಳಕಪ್ಪ ಗುರುಶಾಂತಪ್ಪ ಬಂಡಿ ಇವರುಗಳು** – ಬಾಗಲಕೋಟೆ ಜಿಲ್ಲೆಯ ಜಮಖಂಡಿ, ಮುಧೋಳ, ಬೀಳಗಿ ತಾಲ್ಲೂಕುಗಳಲ್ಲಿನ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸುವ ಸಂಬಂಧ ಸಸಾಲಟ್ಟಿ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಜೆ.ಸಿ.ಮಾಧುಸ್ವಾಮಿ, ಅರಗ ಜ್ಞಾನೇಂದ್ರ ಮತ್ತು ಎಸ್.ಕುಮಾರ ಬಂಗಾರಪ್ಪ ಇವರುಗಳು** – ರಾಜ್ಯದಲ್ಲಿ ಭೂ ಅಭಿವೃದ್ಧಿ ಬ್ಯಾಂಕುಗಳು ತೀವ್ರ ದುಸ್ಥಿತಿಯಲ್ಲಿದ್ದು ಕಾರ್ಯನಿರ್ವಹಣೆ ಮಾಡುವ ಸ್ಥಿತಿಯಲ್ಲಿ ಇಲ್ಲದೇ ಇರುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಆರ್. ಅಶೋಕ್, ಅರವಿಂದ ಲಿಂಬಾವಳಿ ಮತ್ತು ವಿ. ಸೋಮಣ್ಣ ಇವರುಗಳು** – ಬೆಂಗಳೂರಿನಲ್ಲಿ ಪ್ರತಿವರ್ಷ 5 ಲಕ್ಷಕ್ಕೂ ಹೆಚ್ಚು ವಾಹನಗಳು ಹೊಸದಾಗಿ ನೋಂದಣಿಯಾಗುತ್ತಿರುವುದರಿಂದ ಉಂಟಾಗುತ್ತಿರುವ ಸಂಚಾರ ದಟ್ಟಣೆಯನ್ನು ತಡೆಯಲು ಯಾವುದೇ ಪೂರಕ ಯೋಜನೆಗಳನ್ನು ಸರ್ಕಾರದ ವತಿಯಿಂದ ಕೈಗೊಂಡಿಲ್ಲದಿರುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5) **ಶ್ರೀಯುತರುಗಳಾದ ಬಿ.ಎಸ್.ಯಡಿಯೂರಪ್ಪ, ಗೋವಿಂದ.ಎಂ.ಕಾರಜೋಳ, ಜಗದೀಶ್ ಶೆಟ್ಟರ್ ಮತ್ತಿತರರು** – ರಾಜ್ಯದಲ್ಲಿ ನೂರಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಬರಗಾಲದಿಂದ ರೈತರು ಕಂಗಾಲಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

... 4/ ..

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡನಗೌಡರ ಮಹಾಂತೇಶ ಬಸವಂತರಾಯ್ ಅವರು** – ಕಿತ್ತೂರನ್ನು ತಾಲ್ಲೂಕು ಕೇಂದ್ರವಾಗಿ ಘೋಷಣೆ ಮಾಡಿ, ಸುಮಾರು 7 ವರ್ಷ ಕಳೆದರೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹಣ ನೀಡದೇ ಇರುವುದರಿಂದ ಅಲ್ಲಿನ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿದ್ದು ತಾಲ್ಲೂಕಿನ ಸಮಗ್ರ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ನೀಡುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀಮತಿ ಕೆ.ಪೂರ್ಣಿಮಾ ಮತ್ತು ಶ್ರೀ ಜೆ.ಸಿ.ಮಾಧುಸ್ವಾಮಿ ಅವರು** – ತೆಂಗಿನ ಬೆಳೆಯು ಮಳೆಯ ಅಭಾವದಿಂದ / ವಿವಿಧ ರೋಗಗಳಿಂದ ನಾಶವಾಗುತ್ತಿದ್ದು, ಒಂದು ಗಿಡಕ್ಕೆ ರೂ.400/- ರಂತೆ ಪರಿಹಾರ ಮೊತ್ತ ನೀಡಲು ಪ್ರಸ್ತಾಪವಿದ್ದು, ಸದರಿ ಪರಿಹಾರ ಮೊತ್ತವು ಅವೈಜ್ಞಾನಿಕವಾಗಿರುವುದರಿಂದ ಅದನ್ನು ಪರಿಷ್ಕರಿಸಿ ಹೆಚ್ಚಿಸುವ ಬಗ್ಗೆ ಮಾನ್ಯ ತೋಟಗಾರಿಕಾ ಸಚಿವರ ಗಮನ ಸೆಳೆಯುವುದು.

3) **ಶ್ರೀಮತಿ ಲಕ್ಷ್ಮೀ ಆರ್.ಹೆಬ್ಬಾಳ್ಕರ್ ಅವರು** – ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಲಗಾ, ಕೊಂಡಸಕೊಪ್ಪ, ಬಸ್ತವಾಡ, ಕಮಕಾರಕಟ್ಟಿ ಹಾಗೂ ರಕ್ಕಸಕೊಪ್ಪ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆ ಇರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

4) **ಶ್ರೀ ಸಿ.ಟಿ.ರವಿ ಹಾಗೂ ಶ್ರೀ ಬೆಳ್ಳಿಪ್ರಕಾಶ್ ಇವರುಗಳು** – ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯು ಸಮರ್ಪಕವಾಗಿ ಅನುಷ್ಠಾನವಾಗದೇ ಇರುವುದು ಹಾಗೂ ಆ ಯೋಜನೆಯಲ್ಲಿನ ಮಾರ್ಗಸೂಚಿಯಲ್ಲಿ ಕೆಲವೊಂದು ಬದಲಾವಣೆ ತರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

5) **ಶ್ರೀ ಸಿ.ಟಿ.ರವಿ, ಶ್ರೀ ಎಸ್.ಸುರೇಶ್ ಕುಮಾರ್ ಮತ್ತು ಶ್ರೀ ಪ್ರೀತಮ್‌ಗೌಡ ಇವರುಗಳು** – ಕೆ.ಎಸ್.ಆರ್.ಪಿ., ಐ.ಆರ್.ಬಿ. ಮತ್ತು ಕೆ.ಎಸ್.ಐ.ಎಸ್.ಎಫ್. ನಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಅಂತಿಮ ಆಯ್ಕೆ ಪಟ್ಟಿಯನ್ನು 2014ನೇ ಸಾಲಿನಲ್ಲಿ ಪ್ರಕಟಿಸಿದ್ದು ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

6) **ಶ್ರೀ ಗೂಳಿಹಟ್ಟಿ.ಡಿ.ಶೇಖರ್ ಅವರು** – ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ವಾಣಿ ವಿಲಾಸ ಸಾಗರದ ಹಿನ್ನೀರು ಮುಳುಗಡೆ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಮಾಡದಕೆರೆ, ಮತ್ತೋಡು ಮತ್ತು ಶ್ರೀರಾಂಪುರ ಹೋಬಳಿಗಳ ಸಂಪರ್ಕಕ್ಕೆ ಅವಶ್ಯವಿರುವ ಸೇತುವೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಬಸನಗೌಡ ದದ್ದಲ ಅವರು** – ರಾಯಚೂರು ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿನ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ವಸತಿಗೆ ಗುರುಭವನಗಳಿಲ್ಲದೇ ಇರುವುದರಿಂದ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

8) **ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು** – ರಾಜ್ಯದಲ್ಲಿ ಖಾತಾ ಬದಲಾವಣೆ, ಮನೆ ನಂಬರ್ ಪಡೆದುಕೊಳ್ಳುವುದು ಮುಂತಾದ ಕಾರ್ಯಗಳಲ್ಲಿ ಸಾರ್ವಜನಿಕರು ಅನುಭವಿಸುತ್ತಿರುವ ತೊಂದರೆ ಪರಿಹರಿಸುವ ಸಂಬಂಧ ಸರ್ಕಾರದಿಂದ ಹೊರಡಿಸಲಾದ ಸರಳೀಕೃತ ಆದೇಶವು ತಂತ್ರಾಂಶದಲ್ಲಿ ಲಭ್ಯವಿಲ್ಲದೇ ಇ–ಸ್ವತ್ತಿನ ಸಮಸ್ಯೆ ಉಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

9) **ಶ್ರೀ ವಿ. ಸುನೀಲ್ ಕುಮಾರ್ ಅವರು** – 2017–18ರ ಆಯವ್ಯಯದಲ್ಲಿ ಘೋಷಿಸಿರುವಂತೆ ವಿಧಾನ ಸಭಾ ಕ್ಷೇತ್ರವಾರು 5 ಗ್ರಾಮಗಳನ್ನು "ಮಾದರಿ ವಿದ್ಯುತ್ ಗ್ರಾಮ" ಗಳನ್ನಾಗಿ ಪರಿವರ್ತಿಸಲು ಉದ್ದೇಶಿಸಿರುವಂತೆ ಕಾರ್ಕಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 5 ಗ್ರಾಮಗಳನ್ನು "ಮಾದರಿ ವಿದ್ಯುತ್ ಗ್ರಾಮ" ಗಳನ್ನಾಗಿ ಪರಿವರ್ತಿಸಲು ಇದುವರೆಗೆ ಕ್ರಮ ಕೈಗೊಳ್ಳದೇ ಇರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

10) **ಶ್ರೀ ಎನ್. ಮಹೇಶ್ ಅವರು** – ಕೊಳ್ಳೇಗಾಲ ನಗರಸಭೆಯ ವಿವಿಧ ವಾರ್ಡ್‌ಗಳ ವ್ಯಾಪ್ತಿಯಲ್ಲಿ ನಿರ್ಮಾಣಗೊಂಡಿರುವ ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳಿಗೆ ಅಕ್ರಮವಾಗಿ ಖಾತೆ ಮಾಡಿಕೊಟ್ಟಿರುವ ಸಂಬಂಧ ಲೋಕಾಯುಕ್ತ ತನಿಖೆ ಪ್ರಗತಿಯಲ್ಲಿರುವುದರಿಂದ ಕೊಳ್ಳೇಗಾಲ ನಗರಸಭಾ ವ್ಯಾಪ್ತಿಯಲ್ಲಿ ಆಸ್ತಿ ವರ್ಗಾವಣೆ ಮುಂತಾದ ವ್ಯಾಪಾರ ವಹಿವಾಟು ಸ್ಥಗಿತಗೊಂಡಿರುವುದರ ಜೊತೆಗೆ ಸರ್ಕಾರದ ವಸತಿ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನವಾಗದೇ ಇರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

11) **ಡಾ: ಅಂಜಲಿ ಹೇಮಂತ್ ನಿಂಬಾಳ್ಕರ್ ಅವರು** – ರಾಜ್ಯದಲ್ಲಿ ಬಸ್ ಪಾಸ್ ಹೊಂದಿರುವ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

... 6/ ..

12) **ಶ್ರೀ ಕೆ.ಮಹದೇವ ಅವರು** – ನ್ಯಾಯಬೆಲೆ ಅಂಗಡಿಗಳಲ್ಲಿ ಬಯೋ–ಮೆಟ್ರಿಕ್ ಮೂಲಕ ಪಡಿತರ ಪಡೆಯಬೇಕಾಗಿದ್ದು ಕೃಷಿಯಂತಹ ಶ್ರಮದ ಕೆಲಸದಲ್ಲಿ ತೊಡಗಿರುವ ರೈತರ ಬೆರಳಿನ ರೇಖೆಗಳು ಸವೆದಿರುವುದರಿಂದ ಬಯೋಮೆಟ್ರಿಕ್ ನೀಡುವ ಸಮಯದಲ್ಲಿ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರ ಗಮನ ಸೆಳೆಯುವುದು.

13) **ಶ್ರೀ ಡಿ.ಎಸ್. ಸುರೇಶ್ ಅವರು** – ತರೀಕೆರೆ ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯ ವಿವಿಧ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡಿರುವ ವಿವರ ಹಾಗೂ ಕಾಮಗಾರಿಗಳ ಪ್ರಗತಿಗೆ ಸಂಬಂಧಿಸಿದಂತೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

14) **ಶ್ರೀ ಜಗದೀಶ್ ಶೆಟ್ಟರ್ ಮತ್ತು ಶ್ರೀ ಅರವಿಂದ ಬೆಲ್ಲದ್ ಅವರು** – ಅಂಬೇಡ್ಕರ್ ವಸತಿ ಯೋಜನೆಯಲ್ಲಿ ಹಿಂದುಳಿದ ಬಡ ಜನರಿಗೆ ಮನೆ ಕಟ್ಟಲು ಹಣವನ್ನು ಬಿಡುಗಡೆ ಮಾಡದೇ ಇರುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

15) **ಶ್ರೀ ಸಿ.ಎಸ್. ನಿರಂಜನ್ ಕುಮಾರ್ ಅವರು** – ಗುಂಡ್ಲುಪೇಟೆ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಆಲಂಬೂರು ಏತ ನೀರಾವರಿ ಯೋಜನೆಯ 3ನೇ ಹಂತದಲ್ಲಿರುವ ಉತ್ತೂರು ಕೆರೆಯಿಂದ ಗುಂಡ್ಲುಪೇಟೆ ಮತ್ತು ಚಾಮರಾಜನಗರ ತಾಲ್ಲೂಕಿನ ವಿವಿಧ ಕೆರೆಗಳಿಗೆ ನೀರು ತುಂಬಿಸುವುದಕ್ಕೆ ಸಂಬಂಧಪಟ್ಟ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

16) **ಶ್ರೀ ಕೆ. ಶಿವನಗೌಡ ನಾಯಕ ಅವರು** – ದೇವದುರ್ಗ ತಾಲ್ಲೂಕಿನ ಫಲಕನಮರಡಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯು ಪೂರ್ಣಗೊಳ್ಳದೇ ಇರುವುದರಿಂದ ಆ ಭಾಗದ ಜನರು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

17) **ಡಾ: ಹೆಚ್.ಡಿ. ರಂಗನಾಥ್ ಅವರು** – ಕುಣಿಗಲ್ ತಾಲ್ಲೂಕಿನಲ್ಲಿ ಕಳೆದ 3–4 ವರ್ಷಗಳಿಂದ ಎಂ.ಸಿ.ಎಫ್ ಮ್ಯಾಲಿಗ್ನೆಂಟ್ ಕ್ಯಾಟರಲ್ ಫೀವರ್ ರೋಗದಿಂದ ದನಕರುಗಳು ಸಾವನ್ನಪ್ಪುತ್ತಿರುವ ಬಗ್ಗೆ ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರ ಗಮನ ಸೆಳೆಯುವುದು.

18) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಹೊಸದುರ್ಗ ತಾಲ್ಲೂಕಿನ ಶ್ರೀ ಗವೀರಂಗನಾಥಸ್ವಾಮಿ ದೇವಸ್ಥಾನದಲ್ಲಿನ ಪ್ರಾಚೀನ ನಾಣ್ಯಗಳನ್ನು ವ್ಯವಸ್ಥಾಪನಾ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರು ಮಾರಾಟ ಮಾಡಿರುವುದು ಹಾಗೂ ದೇವಸ್ಥಾನದ ಸುತ್ತುಮುತ್ತ ಮುಜರಾಯಿ ಇಲಾಖೆಯ ಜಾಗದಲ್ಲಿ ಅಂಗಡಿ ಹಾಗೂ ಸಮುದಾಯ ಭವನಗಳನ್ನು ನಿರ್ಮಿಸಿರುವುದರ ಬಗ್ಗೆ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

... 7/ ..

19) **ಶ್ರೀ ಕೆ.ವೈ.ನಂಜೇಗೌಡ ಅವರು** – ರಾಜ್ಯದ 14 ಜಿಲ್ಲಾ ಸಹಕಾರಿ ಹಾಲು ಒಕ್ಕೂಟಗಳಲ್ಲಿ ಹಾಲು ಉತ್ಪಾದನೆ ಇಳಿಕೆಯಾಗಿದ್ದು ಹಾಲಿನ ಉತ್ಪಾದನೆ ಹೆಚ್ಚಿಸಲು ವಿಶೇಷ ಪ್ಯಾಕೇಜ್ ನೀಡುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

7. ವಿಶೇಷ ಚರ್ಚೆ

ಶ್ರೀ ಎ.ಟಿ.ರಾಮಸ್ವಾಮಿ ರವರು ಬೆಂಗಳೂರು ದಕ್ಷಿಣ ತಾಲ್ಲೂಕಿನ ಬಿ.ಎಂ.ಕಾವಲು ಗ್ರಾಮದ ಸರ್ವೆ ನಂ.137ರಲ್ಲಿರುವ 310 ಎಕರೆ 18 ಗುಂಟೆ ಸರ್ಕಾರಿ ಜಾಗವನ್ನು ಅಕ್ರಮವಾಗಿ ಶ್ರೀ ಹರಿ ಖೋಡೆ ಕುಟುಂಬಕ್ಕೆ ಪರಭಾರೆಯಾಗುತ್ತಿರುವ ಕುರಿತು ದಿನಾಂಕ: 13.12.2018 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ ವಿಚಾರದ ಬಗ್ಗೆ ವಿಶೇಷ ಚರ್ಚೆ.

8. ಅರ್ಧ ಗಂಟೆ ಕಾಲಾವಧಿ ಚರ್ಚೆ

1) **ಶ್ರೀ ಬೋಪಯ್ಯ ಕೆ.ಜಿ.** ಇವರು **"ಸಾಲ ಮನ್ನಾ ಯೋಜನೆ"** ಕುರಿತು **ದಿನಾಂಕ: 12.12.2018** ರಂದು ಸದನದಲ್ಲಿ ಉತ್ತರಿಸುವ 3ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 35(1354)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2) **ಶ್ರೀ ಈ. ತುಕಾರಾಂ ಇವರು** – ಚಿತ್ರದುರ್ಗ, ಬಳ್ಳಾರಿ ಮತ್ತು ತುಮಕೂರು ಜಿಲ್ಲೆಗಳಲ್ಲಿ 2011ರಿಂದ 2018ರವರೆಗೆ ಕ್ರೋಢೀಕರಿಸಿರುವ ಒಟ್ಟು ಎಸ್.ಪಿ.ವಿ. (ಕೆ.ಎಂ.ಎ.ಆರ್.ಸಿ.) ಮೊತ್ತದ ವಿವರಗಳ ಬಗ್ಗೆ ಹಾಗೂ ಗಣಿ ಬಾಧಿತ ಪ್ರದೇಶಗಳ ಪುನಶ್ಚೇತನ ಸಮಿತಿಯ ವತಿಯಿಂದ ಗಣಿ ಬಾಧಿತ ಪ್ರದೇಶಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3) **ಶ್ರೀ ಎ.ಎಸ್. ಜಯರಾಮ್ (ಮಸಾಲಾ ಜಯರಾಮ್) ಇವರು** – ತುರುವೇಕೆರೆ ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ಹೊಸ ವಿದೇಶಿ ಕಳೆ (ಆಂಬ್ರೋಸಿಯ ಪ್ಸಿಲೋಸ್ಟೇಕಿಯ) ಹರಡಿರುವುದರಿಂದ ಅಲ್ಲಿನ ಕೃಷಿ / ತೋಟಗಾರಿಕೆ ಬೆಳೆಗಳು ನಾಶವಾಗುತ್ತಿದ್ದು ರೈತರು ಆರ್ಥಿಕ ಸಂಕಷ್ಟಕ್ಕೊಳಗಾಗಿರುವ ವಿಷಯಕ್ಕೆ ಸಂಬಂಧಪಟ್ಟಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

4) **ಶ್ರೀ ಎಸ್.ಎ.ರಾಮದಾಸ್** ಇವರು **"ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮದ ಅನುಷ್ಠಾನ"** ಕುರಿತು **ದಿನಾಂಕ: 13.12.2018** ರಂದು ಸದನದಲ್ಲಿ ಉತ್ತರಿಸುವ 4ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 60(941)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

5) **ಶ್ರೀಮತಿ ಅನಿತಾ ಕುಮಾರಸ್ವಾಮಿ, ಶ್ರೀ ಎ. ಮಂಜುನಾಥ್, ಡಾ: ಹೆಚ್.ಡಿ. ರಂಗನಾಥ್ ಮತ್ತು ಶ್ರೀ ಸಿ.ಎನ್. ಬಾಲಕೃಷ್ಣ, ಇವರುಗಳು** ರಾಮನಗರ, ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಸೇರಿದಂತೆ ಇತರೆ ಜಿಲ್ಲೆಗಳಲ್ಲಿ ರೇಷ್ಮೆ ಮತ್ತು ಮಾವು ಬೆಳೆಗೆ ಸೂಕ್ತ ಬೆಲೆ ಸಿಗದೇ ರೈತರಿಗೆ ಆಗುತ್ತಿರುವ ತೊಂದರೆಯ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

... 8/ ..

6) **ಶ್ರೀ ಗೋವಿಂದ ಎಂ. ಕಾರಜೋಳ, ಶ್ರೀ ಆನಂದ @ ಚಂದ್ರಶೇಖರ ಮಾಮನಿ ಹಾಗೂ ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ ಇವರುಗಳು** – ವಿಜಯಪುರ ಜಿಲ್ಲೆಯ ಇಂಡಿ, ನಾಗಠಾಣ ಮತ್ತು ಬಬಲೇಶ್ವರ ಮತಕ್ಷೇತದ ನೀರಾವರಿ ವಂಚಿತ 61 ಹಳ್ಳಿಗಳು ಶಾಶ್ವತ ಬರಗಾಲಕ್ಕೆ ತುತ್ತಾಗಿರುವುದರಿಂದ ಮುಳವಾಡ ಏತ ನೀರಾವರಿ 3ನೇ ಹಂತದಲ್ಲಿ ಲಭ್ಯವಿರುವ ನೀರನ್ನು ಬಳಸಿಕೊಂಡು ಶ್ರೀ ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

7) **ಶ್ರೀ ಪ್ರತಾಪಗೌಡ ಪಾಟೀಲ್, ಶ್ರೀ ರಾಜಾ ವೆಂಕಟಪ್ಪ ನಾಯಕ, ಶ್ರೀ ಬಸವನಗೌಡ ದದ್ದಲ್ ಹಾಗೂ ಡಾ. ಎಸ್. ಶಿವರಾಜ್ ಪಾಟೀಲ್ ಇವರುಗಳು** – ತುಂಗಭದ್ರಾ ಜಲಾಶಯದ ಜ್ವಲಂತ ಸಮಸ್ಯೆಗಳು ಹಾಗೂ ಜಲಾಶಯದಲ್ಲಿನ ನೀರನ್ನು ಕಾಲುವೆಗಳಿಗೆ ನೀರು ಸರಬರಾಜು ಮಾಡುವುದರಲ್ಲಿನ ನಿರ್ಲಕ್ಷ್ಯದಿಂದಾಗಿ ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಎರಡನೇ ಬೇಸಿಗೆ ಬೆಳೆಗೆ ನೀರಿನ ಕೊರತೆ ಉಂಟಾಗುತ್ತಿರುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

8) **ಶ್ರೀ ಎಂ.ಪಿ. ರೇಣುಕಾಚಾರ್ಯ; ಶ್ರೀ ಗೋವಿಂದ ಎಂ. ಕಾರಜೋಳ, ಶ್ರೀ ಸಿದ್ದು ಕೆ. ಸವದಿ, ಶ್ರೀ ಅಭಯ ಪಾಟೀಲ್, ಶ್ರೀ ನರಸಿಂಹ ನಾಯಕ (ರಾಜುಗೌಡ) ಮತ್ತು ಶ್ರೀ ದೊಡ್ಡನಗೌಡ ಜಿ. ಪಾಟೀಲ್; ಶ್ರೀ ಗೂಳಿಹಟ್ಟಿ.ಡಿ.ಶೇಖರ್ ಮತ್ತು ಶ್ರೀಮತಿ ಕೆ.ಪೂರ್ಣಿಮ; ಶ್ರೀ ಲಾಲಾಜಿ ಆರ್ ಮೆಂಡನ್ ಹಾಗೂ ಶ್ರೀ ಕೆ.ರಘುಪತಿ ಭಟ್, ಶ್ರೀ ಡಿ.ವೇದವ್ಯಾಸ ಕಾಮತ್ ಮತ್ತು ಡಾ: ವೈ.ಭರತ್ ಶೆಟ್ಟಿ, ಇವರುಗಳು** – ಹೊನ್ನಾಳಿ ತಾಲ್ಲೂಕಿನ ವಿವಿಧ ಮರಳು ಕ್ವಾರಿಗಳಲ್ಲಿ ದರ ವ್ಯತ್ಯಾಸದಿಂದ ಸಾರ್ವಜನಿಕರಿಗೆ ಮರಳಿನ ತೊಂದರೆ ಆಗುತ್ತಿರುವುದು; ರಾಜ್ಯಾದ್ಯಂತ ವ್ಯಾಪಿಸಿರುವ ಮರಳು ಮಾಫಿಯಾದಿಂದ ಮನೆ ನಿರ್ಮಾಣಕ್ಕೆ ಮರಳು ಸಿಗದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು; ಚಿತ್ರದುರ್ಗ ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಮರಳು ಹಾಗೂ ಕಲ್ಲು ಗಣಿ ಗುತ್ತಿಗೆಗಳನ್ನು ತಡೆಯುವುದು ಮತ್ತು ಸ್ಥಳೀಯವಾಗಿ ಪಟ್ಟಾ ಜಮೀನು, ಹಳ್ಳ-ಕುಂಟೆಗಳಲ್ಲಿ ಲಭ್ಯವಾಗುವ ಮರಳನ್ನು ಮರು ಮಾರಾಟ ಮಾಡಲು ಅವಕಾಶ ನೀಡದೇ ಸರ್ಕಾರಿ ಕಾಮಗಾರಿಗಳಿಗೆ ಬಳಸಲು ಅನುಮತಿ ನೀಡುವುದು; ಕರಾವಳಿ ಜಿಲ್ಲೆಗಳಲ್ಲಿ ನದಿ ನೀರಿನಿಂದ ತೆಗೆಯುವ ಮರಳುಗಾರಿಕೆಗೆ ಉಂಟಾಗಿರುವ ಕಾನೂನು ತೊಡಕಿನಿಂದ ಸಾವಿರಾರು ಕೂಲಿ ಕಾರ್ಮಿಕರು ನಿರುದ್ಯೋಗಿಗಳಾಗಿರುವುದು ಹಾಗೂ ಉಡುಪಿ ಜಿಲ್ಲೆಯಲ್ಲಿ ಸಿ.ಆರ್.ಜೆಡ್ ವ್ಯಾಪ್ತಿಯಲ್ಲಿ ಮರಳು ದಿಬ್ಬ ತೆರವುಗೊಳಿಸುವುದು ಮುಂತಾದ ವಿಚಾರಗಳ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಸ್. ಮೂರ್ತಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm